33

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರವಣಬೆಳಗೊಳ, ದೊಡ್ಡಕಾಡನೂರು ಹಾಗೂ ಕಿಕ್ಕೇರಿಯಲ್ಲಿರುವ ಕಾವೇರಿ ನೀರಾವರಿ ನಿಗಮ ನಿಯಮಿತದ ಅಡಿಯಲ್ಲಿ ಬರುವ ಹೇಮಾವತಿ ನಾಲಾ ಉಪ ವಿಭಾಗದ ಕೆಲವು ಭಾಗಗಳನ್ನು ಕ್ರಮವಾಗಿ ನಂ. 3, ಹೇಮಾವತಿ ಎಡದಂಡೆ ನಾಲಾ ವಿಭಾಗ, ಕೆ.ಆರ್. ಪೇಟೆ ವಿಭಾಗಕ್ಕೆ ಹಾಗೂ ನಂ. 1 ಹೇಮಾವತಿ ಎಡದಂಡೆ ನಾಲಾ ವಿಭಾಗ ಚನ್ನರಾಯಪಟ್ಟಣ, ಹಾಸನ ಜಿಲ್ಲೆ ವಿಭಾಗಕ್ಕೆ ಸ್ಥಳಾಂತರಿಸುವ ಬಗ್ಗೆ.

**ಓದಲಾಗಿದೆ:**

1. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಮೈಸೂರು ರವರ ಪತ್ರ ಸಂಖ್ಯೆ:ಕಾನೀನಿ:ಆ/ಸಿ-1/ಸಿ.ಆರ್:301/2019-20/6545, ದಿನಾಂಕ: 24/01/2020 ಮತ್ತು 15/02/2021.
2. ಸರ್ಕಾರದ ಪತ್ರ ಸಂಖ್ಯೆ: ಜಸಂಇ 122 ಎಸ್‌ಇಎಸ್ 2019, ದಿನಾಂಕ:29/07/2019.
3. ಮುಖ್ಯ ಇಂಜಿನಿಯರ್, ಕಾವೇರಿ ನೀರಾವರಿ ನಿಗಮ ನಿಯಮಿತ, ಹೇಮಾವತಿ ಜಲಾಶಯ ಯೋಜನೆ, ಗೊರೂರು ಇವರ ಪತ್ರ ಸಂಖ್ಯೆ: ಮುಇಂಹೇಯೋ:ಸಿ-2:ಉಪವಿಭಾಗ ಸ್ಥಳಾಂತರ:2019-20/2332, ದಿನಾಂಕ:10/02/2021.

*****

**ಪ್ರಸ್ತಾವನೆ :**

1. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ಇವರು ಮೇಲೆ (1)ರಲ್ಲಿ ಓದಲಾದ ಪತ್ರ, ದಿನಾಂಕ: 22/01/2020 ರಲ್ಲಿ ಹಾಸನ ಜಿಲ್ಲೆ, ಶ್ರವಣಬೆಳಗೊಳ ತಾಲ್ಲೂಕು ವ್ಯಾಪ್ತಿಯ, ದೊಡ್ಡಕಾಡನೂರು ಹಾಗೂ ಶ್ರವಣಬೆಳಗೋಳದಲ್ಲಿರುವ ಹೇಮಾವತಿ ನಾಲಾ ಉಪ ವಿಭಾಗದ ಕೃಷ್ಣರಾಜಪೇಟೆ ವಿಧಾನಸಭಾ ಕ್ಷೇತ್ರದ ಭಾಗವನ್ನು ಆ ಭಾಗದ ಮುಖ್ಯನಾಲೆ, ವಿತರಣಾ ನಾಲೆಗಳು ಮತ್ತು ಕೆರೆಗಳ ಸಮೇತ ನಂ.3, ಹೇಮಾವತಿ ಎಡದಂಡೆ ನಾಲಾ ವಿಭಾಗ, ಕೃಷ್ಣರಾಜಪೇಟೆ, ಮಂಡ್ಯ ಜಿಲ್ಲೆಯ ವ್ಯಾಪ್ತಿಗೆ ಹಾಗೂ ಮಂಡ್ಯ ಜಿಲ್ಲೆ, ಕೃಷ್ಣರಾಜಪೇಟೆ ತಾಲ್ಲೂಕು ವ್ಯಾಪ್ತಿಯ ಕಿಕ್ಕೇರಿಯಲ್ಲಿರುವ ಹೇಮಾವತಿ ನಾಲಾ ಉಪವಿಭಾಗದ ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ಭಾಗವನ್ನು ಆ ಭಾಗದ ಮುಖ್ಯನಾಲೆ, ವಿತರಣಾ ನಾಲೆಗಳು ಮತ್ತು ಕೆರೆಗಳ ಸಮೇತ ನಂ.3, ಹೇಮಾವತಿ ಎಡದಂಡೆ ನಾಲಾ ವಿಭಾಗ, ಚನ್ನರಾಯಪಟ್ಟ, ಹಾಸನ ಜಿಲ್ಲೆಯ ವ್ಯಾಪ್ತಿಗೆ ಸ್ಥಳಾಂತರಿಸುವಂತೆ ಹಾಗೂ ಉಳಿದಂತೆ ಸದರಿ ಉಪ ವಿಭಾಗಗಳನ್ನು ಈಗಿರುವಂತೆಯೇ ಮುಂದುವರೆಸುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು.

2. ಮೇಲೆ (2)ರಲ್ಲಿ ಓದಲಾದ ದಿನಾಂಕ: 29/07/2019 ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾನೀನಿನಿ., ಇವರನ್ನು ಪ್ರಸ್ತಾವನೆಗೆ ಸಂಬಂಧಿಸಿದಂತೆ ಪ್ರಸ್ತುತ ಇರುವ ಉಪ ವಿಭಾಗಗಳ ಸ್ಥಳದ ನಕ್ಷೆ, ಹುದ್ದೆಗಳ ಮರುಹಂಚಿಕೆ ಮತ್ತು ಇತರೆ ವಿಷಯಗಳಿಗೆ ಸಂಬಂಧಿಸಿದಂತೆ ಮಾಹಿತಿ ನೀಡುವಂತೆ ಕೋರಲಾಗಿತ್ತು.

3. ಮೇಲೆ (3)ರಲ್ಲಿ ಓದಲಾದ ದಿನಾಂಕ:15/02/2021ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ಇವರು ಸಲ್ಲಿಸಿದ ವರದಿಯಲ್ಲಿ ಅಧೀಕ್ಷಕ ಇಂಜಿನಿಯರ್, ಹೇಮಾವತಿ ಜಲಾಶಯ ಯೋಜನೆ, ಗೊರೂರು ಇವರು ಮಾಡಿರುವ ದಿನಾಂಕ:10/02/2021ರ ಶಿಫಾರಸ್ಸನ್ನು ಒಪ್ಪಿ, ಕೆ.ಆರ್.ಪೇಟೆ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ವ್ಯಾಪ್ತಿಯನ್ನು ಮಾತ್ರ ಕೆ.ಆರ್.ಪೇಟೆ ವಿಭಾಗ ಮತ್ತು ಹಾಲಿ ಇರುವ ಉಪ ವಿಭಾಗಗಳಿಗೆ ಸೇರ್ಪಡೆಗೊಳಿಸಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಯಾವುದೇ ಹುದ್ದೆ ಅಥವಾ ಸಿಬ್ಬಂದಿಗಳ ಹಂಚಿಕೆ ಅಥವಾ ಮರುಹಂಚಿಕೆಯ ಅವಶ್ಯಕತೆ ಇರುವುದಿಲ್ಲ ಎಂದು ಅಭಿಪ್ರಾಯಿಸಿರುವುದರಿಂದ ಯಾವುದೇ ಹುದ್ದೆಯನ್ನು ಸೃಜಿಸುವ ಅಥವಾ ಹೊಂದಣಿಕೆ ಮಾಡವ ಅವಶ್ಯಕತೆ ಕಂಡುಬಾರದ ಕಾರಣ ಯಾವುದೇ ಆರ್ಥಿಕ ತೊಡಕು ಉಂಟಾಗುವುದಿಲ್ಲ ಎಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ.

4. ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, ಆಯಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಟ್ಟ ಉಪವಿಭಾಗದ ಭಾಗಗಳನ್ನು ಆಯಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ವಿಭಾಗ ಕಚೇರಿಗೆ ಸ್ಥಳಾಂತರಿಸುವುದು ವಿಭಾಗ ಹಾಗೂ ಉಪವಿಭಾಗಗಳ

ಆಡಳಿತಾತ್ಮಕ ಹಿತದೃಷ್ಟಿಯಿಂದ ಸೂಕ್ತವೆಂದು ಸರ್ಕಾರವು ನಿರ್ಧರಿಸಿ, ಅದರಂತೆ ಸ್ಥಳಾಂತರಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 122 ಎಸ್ಎಎಸ್ 2019 (ಇ)**
**ಬೆಂಗಳೂರು, ದಿನಾಂಕ: 7-10-2021**

5. ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಶ್ರವಣಬೆಳಗೊಳ ಹಾಗೂ ಕೃಷ್ಣರಾಜಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕಾವೇರಿ ನೀರಾವರಿ ನಿಗಮ ನಿಯಮಿತದ ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಕಾವೇರಿ ನೀರಾವರಿ ನಿಗಮ ನಿಯಮಿತ, ಗೊರೂರು ಇವರ ಅಧೀನದಲ್ಲಿ ಬರುವ ಈ ಕೆಳಕಂಡ ಉಪವಿಭಾಗಕ್ಕೆ ಸಂಬಂಧಿಸಿದ ಭಾಗಗಳನ್ನು ಅವುಗಳ ಹೆಸರಿನ ಮುಂದೆ ನಮೂದಿಸಿರುವ ಸಂಬಂಧಪಟ್ಟ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ವಿಭಾಗೀಯ ಕಚೇರಿಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸ್ಥಳಾಂತರಿಸಿ ಆದೇಶಿಸಿದೆ :

| ಕ್ರಮ ಸಂಖ್ಯೆ | ಉಪವಿಭಾಗದ ಹೆಸರು ಹಾಗೂ ಸ್ಥಳಾಂತರಿಸಬೇಕಾದ ಭಾಗಗಳು | ಸ್ಥಳಾಂತರಿಸಲಾದ ವಿಭಾಗ |
|---|---|---|
| 1) | ನಂ. 08, ಹೇಮಾವತಿ ಎಡದಂಡೆ ನಾಲಾ ಉಪವಿಭಾಗ, ಶ್ರವಣಬೆಳಗೊಳ, ಹಾಸನ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ಕೃಷ್ಣರಾಜಪೇಟೆ ವಿಧಾನಸಭಾ ಕ್ಷೇತ್ರದ ಭಾಗವನ್ನು ಮತ್ತು ಆ ಭಾಗದಲ್ಲಿ ಬರುವ ಮುಖ್ಯ ನಾಲೆ, ವಿತರಣಾ ನಾಲೆಗಳು ಮತ್ತು ಕೆರೆಗಳು. | ನಂ. 3, ಹೇಮಾವತಿ ಎಡದಂಡೆ ನಾಲಾ ವಿಭಾಗ, ಕಾವೇರಿ ನೀರಾವರಿ ನಿಗಮ ನಿಯಮಿತ, ಕೃಷ್ಣರಾಜಪೇಟೆ, ಮಂಡ್ಯ ಜಿಲ್ಲೆ ವಿಭಾಗಕ್ಕೆ |
| 2) | ನಂ.04, ಹೇಮಾವತಿ ಬಲದಂಡೆ ನಾಲಾ ಉಪವಿಭಾಗ, ಕಾವೇರಿ ನೀರಾವರಿ ನಿಗಮ ನಿಯಮಿತ, ದೊಡ್ಡಕಾಡನೂರು, ಹಾಸನ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ಕೆ.ಆರ್ ಪೇಟೆ ವಿಧಾನಸಭಾ ಕ್ಷೇತ್ರದ ಭಾಗವನ್ನು ಮತ್ತು ಆ ಭಾಗದಲ್ಲಿ ಬರುವ ಮುಖ್ಯನಾಲೆ, ವಿತರಣಾ ನಾಲೆಗಳು ಮತ್ತು ಕೆರೆಗಳು | ನಂ. 3, ಹೇಮಾವತಿ ಎಡದಂಡೆ ನಾಲಾ ವಿಭಾಗ, ಕಾವೇರಿ ನೀರಾವರಿ ನಿಗಮ ನಿಯಮಿತ, ಕೃಷ್ಣರಾಜಪೇಟೆ, ಮಂಡ್ಯ ಜಿಲ್ಲೆ ವಿಭಾಗಕ್ಕೆ |
| 3) | ನಂ.10, ಹೇಮಾವತಿ ಎಡದಂಡೆ ನಾಲಾ ಉಪವಿಭಾಗ, ಕಾವೇರಿ ನೀರಾವರಿ ನಿಗಮ ನಿಯಮಿತ, ಕಿಕ್ಕೇರಿ, ಕೃಷ್ಣರಾಜಪೇಟೆ ತಾಲ್ಲೂಕು, ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ಭಾಗವನ್ನು ಮತ್ತು ಆ ಭಾಗದಲ್ಲಿ ಬರುವ ಮುಖ್ಯನಾಲೆ, ವಿತರಣಾ ನಾಲೆಗಳು ಮತ್ತು ಕೆರೆಗಳು | ನಂ. 1, ಹೇಮಾವತಿ ಎಡದಂಡೆ ನಾಲಾ ವಿಭಾಗ, ಕಾವೇರಿ ನೀರಾವರಿ ನಿಗಮ ನಿಯಮಿತ, ಚನ್ನರಾಯಪಟ್ಟಣ, ಹಾಸನ ಜಿಲ್ಲೆ ವಿಭಾಗಕ್ಕೆ |

ಮೇಲ್ಕಂಡಂತೆ ಮಾಡಲಾದ ಸ್ಥಳಾಂತರಗಳಿಂದ ಯಾವುದೇ ಹೆಚ್ಚುವರಿ ಹುದ್ದೆ ಅಥವಾ ಸಿಬ್ಬಂದಿಗಳ ಹಂಚಿಕೆ ಅಥವಾ ಮರುಹಂಚಿಕೆಗೆ ಅವಕಾಶ ಇರುವುದಿಲ್ಲ ಹಾಗೂ ಸರ್ಕಾರಕ್ಕೆ ಹೆಚ್ಚುವರಿ ಹೊರೆಯಾಗುವುದಿಲ್ಲವೆಂಬುದನ್ನು ಖಚಿತಪಡಿಸುವ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Manjunatha HM 7/10

**(ಹೆಚ್.ಎಂ.ಮಂಜುನಾಥ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸೇವೆಗಳು-ಎ).

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ)/ (ಈ &ಆರ್.ಎಸ್.ಎ)/ (ಎ&ಇ), ಕರ್ನಾಟಕ.
2. ಪ್ರಧಾನ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದರಾವ್ ವೃತ್ತ, ಬೆಂಗಳೂರು.

3. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು/ಮೈಸೂರು.
4. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ನಿರ್ವಹಣಾ ಉನ್ನತ ಕೇಂದ್ರ (ಎ.ಸಿ.ಐ.ಡಬ್ಲ್ಯೂ.ಆರ್.ಎಂ.), ಬೆಂಗಳೂರು.
5. ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಕಾನೀನಿನಿ, ಗೊರೂರು.
6. ಎಲ್ಲಾ ಮುಖ್ಯ ಇಂಜಿನಿಯರ್ ಗಳು, ಜಲಸಂಪನ್ಮೂಲ ಇಲಾಖೆ.
7. ನಿರ್ದೇಶಕರು, ಜಿಯೋಮೆಟಿಕ್ಸ್ ಕೇಂದ್ರ, ಬೆಂಗಳೂರು (ಜಲ ಸಂಪನ್ಮೂಲ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸುವಂತೆ ಕೋರಿದೆ)
8. ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ / ಮಂಡ್ಯ ಜಿಲ್ಲೆ.
9. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್. ಹಾಸನ / ಮಂಡ್ಯ.
10. ವಿಶೇಷ ಭೂಸ್ವಾಧೀನಾಧಿಕಾರಿಗಳು, ಹಾಸನ ಜಿಲ್ಲೆ / ಮಂಡ್ಯ ಜಿಲ್ಲೆ.
11. ಹೆಚ್ಚುವರಿ ನಿರ್ದೇಶಕರು ಹಾಗೂ ಕಾರ್ಯಕಾರಿ ಮುಖ್ಯಸ್ಥರು ಖಜಾನೆ-2, ಖಾಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 009.
12. ಮಾನ್ಯ ಜಲಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
13. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
14. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
15. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ (ಸೇವೆಗಳು), ವಿಕಾಸಸೌಧ, ಬೆಂಗಳೂರು.
16. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿ.